KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

**ಬೇಡಿಕೆ** ಅಧಿವೇಶನದಲ್ಲಿ ಕೋವಿಡ್ ಚಿಕಿತ್ಸೆ ಉಪಕರಣಗಳ ಖರೀದಿ ಭ್ರಷ್ಟಾಚಾರ ಬಗ್ಗೆ ಉತ್ತರಿಸಿ: ಸರ್ಕಾರಕ್ಕೆ ಕೆಪಿಸಿಸಿ ಅಧ್ಯಕ್ಷ ಡಿಕೆಶಿ ಆಗ್ರಹ

# ಕೊರೋನಾ ಚರ್ಚೆಗೆ ವಿಶೇಷ ಅಧಿವೇಶನ ನಡೆಸಿ

**ಕನ್ನಡಪ್ರಭ ವಾರ್ತೆ** ಕಲಬುರಗಿ

ಕೋವಿಡ್ 19 ಚಿಕಿತ್ಸೆಗಾಗಿ ಬೆಡ್, ಔಷಧಿ, ಪಿಪಿಇ ಕಿಟ್, ಸ್ಯಾನಿಟೈಸರ್ ಮತ್ತಿತರ ವೈದ್ಯಕೀಯ ಉಪಕರಣ ಖರೀದಿಸುವಾಗ ಭ್ರಷ್ಟಾಚಾರ ನಡೆದಿರುವುದಾಗಿ ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಈಗಾಗಲೇ ಗಂಭೀರ ಆರೋಪ ಮಾಡಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಈ ವಿಚಾರಗಳ ಚರ್ಚೆಗೆ ವಿಧಾನ ಸಭೆ ವಿಶೇಷ ಅಧಿವೇಶನ ಕರೆಯುವಂತೆ ಆಗ್ರಹಿಸಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಏನೂ ಹಗರಣ ಆಗಿಲ್ಲ ಎನ್ನುವಾಗ ಅದ್ಯಾಕೆ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಸಭೆ ನಡೆಸಲು ಅವಕಾಶ ನೀಡುತ್ತಿಲ್ಲವೆಂದು ಪ್ರಶ್ನಿಸಿದರು.

ಕೊರೋನಾ ವೈದ್ಯಕೀಯ ತುರ್ತು ಪರಿಸ್ಥಿತಿ ನಿಭಾಯಿಸುವಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳೆರಡೂ ಸಂಪೂರ್ಣ ಎಡವಿ ಬಿದ್ದಿದೆ. ಮೋದಿಯವರು ನಮ್ಮ ಸರ್ಕಾರವನ್ನು 10 ಪರ್ಸೆಂಟ್ ಸರ್ಕಾರ ಎಂದಿದ್ದರು. ಈಗ 200, 300 ಪರ್ಸೆಂಟ್ ನಡೀತಿದೆ ಎಂದು ಟಾಂಗ್ ನೀಡಿದರು.

ತಮಗೆ ಬಿಜೆಪಿ ನೀಡಿರುವ ಲೀಗಲ್ ನೋಟಿಸ್ ಬಗ್ಗೆ ಮಾತನಾಡಿದ ಅವರು ಎಂತೆಂಥದೋ ನೋಟಿಸುಗಳಿಗೆ ಹೆದರಿಲ್ಲ, ನಿಮ್ಮ ನೋಟಿಸಿಗೆ ಹೆದರುತ್ತೇವಾ ಎಂದರು.

ಬಿಜೆಪಿ ಸರ್ಕಾರದ ಯಾವ ಮಂತ್ರಿಯೂ ಸೋಂಕಿತರನ್ನ ಭೇಟಿ ಮಾಡಲಿಲ್ಲ. ಇದನ್ನೆಲ್ಲ ಪ್ರಶ್ನಿದರೆ ನನಗೆ ಸಿದ್ದರಾಮಯ್ಯನವರಿಗೆ ನೋಟಿಸ್ ಕೊಡ್ತಿರಾ? ನಿಮ್ಮ ಅವ್ಯವಹಾರ ಬಯಲು ಮಾಡಿದ ಮಾಧ್ಯಮವರಿಗೆ ನೋಟಿಸ್‌ಕೊಡಿ ನೋಡೋಣ ಎಂದು ಸವಾಲು ಹಾಕಿದರು.



ಕಲಬುರಗಿ ಜಿಲ್ಲೆಯ ಅಫಜಲ್ಪುರ ತಾಲೂಕಿನ ಸುಕ್ಷೇತ್ರ ದೇವಲ ಗಾಣಗಾಪೂರದ ದತ್ತಾತ್ರೇಯ ದೇವಸ್ಥಾನಕ್ಕೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಮಂಗಳವಾರ ಭೇಟಿ ನೀಡಿ ಪೂಜೆ ಸಲ್ಲಿಸಿದರು.

## ನಾನು ಫಿಟ್ ಅಂಡ್ ಫೈನ್ ಆಗಿದ್ದೇನೆ!

ಕೊರೋನಾ ಸೋಂಕಿಗೆ ಒಳಗಾಗಿ ಆಸ್ಪತ್ರೆಯಲ್ಲಿರುವ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಪ್ರಾಥಮಿಕ ಸಂಪರ್ಕದಲ್ಲಿದ್ದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನಿಯಮದಂತೆ 7 ದಿನ ಹೋಂ ಕ್ವಾರಂಟೈನ್ ಆಗಿರಬೇಕಿತ್ತು. ಆದರೆ ಅವರೀಗ ಸ್ಪೀಕ್ ಅಪ್ ಕರ್ನಾಟಕ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಲುವಾಗಿ ಕಲಬುರಗಿ ಪ್ರವಾಸ ಕೈಗೊಂಡದಲ್ಲದೆ ಕಾರ್ಯಕರ್ತರ ಸಭೆ ಸಹ ನಡೆಸಿದರು. ಗಾಣಗಾಪುರ ಕ್ಷೇತ್ರಕ್ಕೂ ಭೇಟಿ ನೀಡಿದರು. ಈ ಬಗ್ಗೆ ಸುದ್ದಿಗಾರರು ಕೇಳಿದಾಗ ನಾನು ಫಿಟ್ ಆ್ಯಂಡ್ ಫೈನ್ ಇದ್ದೇನೆ. ಸಮಯಕ್ಕೆ ತಕ್ಕಂತೆ ಟ್ರಿಟ್ಮೆಂಟ್ ತಗೊತೀನಿ, ಯಾರ ಪ್ರೈಮರಿ ಕಾಂಟ್ಯಾಕ್ಟ್‌ಗೂ ಬಂದಿಲ್ಲ ಎಂದರು. ಜೊತೆಗೆ ತಮ್ಮ ಕೊರಳಲ್ಲಿನ ಆಸ್ಪತ್ರೆ ಐಡಿ ಕಾರ್ಡ್ ತೋರಿಸುತ್ತ ಯಾರು ಭಯ ಪಡುವ ಅವಶ್ಯಕತೆ ಇಲ್ಲ ಎಂದರು.